33 ಕೆ.ವಿ. ಮತ್ತು 100 K.V ವಿದ್ಯುತ್ ಉಪ ವಿಭಾಗ ಪ್ರಾರಂಭಿಸುವುದು

844 (567) ಡಾ: ಶರಣಪ್ರಕಾಶ್ ರುದ್ರಪ್ಪ ಪಾಟೀಲ್ (ಸೇಡಂ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೇಡಂ ತಾಲ್ಲೂಕಿನ ಕೊಲಕುಂದಾ ಮತ್ತು ಮೋತಕಪಲ್ಲಿ ಗ್ರಾಮಗಳಲ್ಲಿ 33 ಕೆ.ವಿ ವಿದ್ಯುತ್ ಉಪ ಕೇಂದ್ರಗಳು ಸ್ಥಾಪನೆ ಮಾಡುವಲ್ಲಿ ತಡವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ, ಯಾವಾಗ ಪ್ರಾರಂಭ ಮಾಡಲಾಗುವುದು;

ಆ) ಸೇಡಂ ತಾಲ್ಲೂಕಿನ ಮದನಾ ಗ್ರಾಮದಲ್ಲಿ 100 ಕೆ.ವಿ. ವಿದ್ಯುತ್ ಕೇಂದ್ರ ಸ್ಥಾಪನೆ ಮಾಡುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವಾಗ ಸ್ಥಾಪನೆ ಮಾಡಲಾಗುವುದು;

ಕುಮಾರಿ ಶೋಭಾ ಕರಂದ್ಲಾಜೆ (ಇಂದನ ಸಚಿವರು) :

ಅ) ಸೇಡಂ ತಾಲ್ಲೂಕಿನ ಕೊಲಕುಂದಾ ಗ್ರಾಮದಲ್ಲಿ 33/11 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು ನಿರ್ಮಿಸಲು ಸರ್ವೆ ನಂಬರ್ 554 ನಲ್ಲಿ 2 ಎಕರೆ ಖಾಸಗಿ ಜಮೀನನ್ನು ಗುರುತಿಸಿ, ಪ್ರತಿ ಎಕರೆಗೆ 2 ಲಕ್ಷ ರೂ.ನಂತೆ ಜಿಲ್ಲಾಧಿಕಾರಿಯವರಿಂದ ದರ ನಿಗದಿಪಡಿಸಲಾಗಿತ್ತು. ಆದರೆ ಜಮೀನಿನ ಮಾಲೀಕರಿಗೆ ಜಮೀನು ದರ ಒಪ್ಪಿಗೆಯಾಗದ ಕಾರಣ, ಜಮೀನನ್ನು ಕೊಡಲು ನಿರಾಕರಿಸಿರುತ್ತಾರೆ. ಆದ್ದರಿಂದ, ಬೇರೊಂದು ಜಮೀನನ್ನು ಗುರುತಿಸುವ ಪ್ರಕ್ರಿಯೆಯು ಜಾರಿಯಲ್ಲಿದೆ.

ಮೊದಕಪಲ್ಲಿ ಗ್ರಾಮದಲ್ಲಿ 33 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು ನಿರ್ಮಿಸಲು ತಾಂತ್ರಿಕ ಸಾಧ್ಯತೆಗಳನ್ನು ಪರಿಶೀಲಿಸಿ, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯು ಮುಂದಿನ ಸೂಕ್ತ ಕ್ರಮ ತೆಗೆದುಕೊಳ್ಳಲಿದೆ.

ಆ) ಸೇಡಂ ವಿಧಾನ ಸಭಾ ಕ್ಷೇತ್ರದ ಮದನ ಗ್ರಾಮದಿಂದ ಅಂದಾಜು 12 ಕಿ.ಮೀ. ದೂರದಲ್ಲಿರುವ ಗುರುಮಿಟ್ಕಲ್‌ನಲ್ಲಿ 110 ಕೆ.ವಿ. ವಿದ್ಯುತ್ ಉಪಕೇಂದ್ರದ ಕಾಮಗಾರಿಯನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಕೈಗೆತ್ತಿಕೊಂಡಿದ್ದು, ಕಾಮಗಾರಿಯು ಪ್ರಗತಿಯಲ್ಲಿದೆ. ಗುರುಮಿಟ್ಕಲ್‌ನಲ್ಲಿ 110 ಕೆ.ವಿ. ವಿದ್ಯುತ್ ಉಪಕೇಂದ್ರ ನಿರ್ಮಾಣ ಮಾಡಿ ಮುಂದಿನ ಲೋಡ್ ಬೆಳವಣಿಗೆಗಳನ್ನು ಗಮನಿಸಿ ಮದನದಲ್ಲಿ 110 ಕೆ.ವಿ. ವಿದ್ಯುತ್ ಉಪಕೇಂದ್ರ ಸ್ಥಾಪನೆಯ ಪ್ರಸ್ತಾವನೆಯನ್ನು ಪರಿಶೀಲಿಸಲಾಗುವುದು.